ಚುನಾವಣಾ ಜರೂರು

सत्यमेव जयते

# ರಾಜ್ಯ ಚುನಾವಣಾ ಆಯೋಗ, ಕರ್ನಾಟಕ

ಕರ್ನಾಟಕ ರಾಜ್ಯ ಸಹಕಾರ ಮಾರಾಟ ಮಂಡಳಿ ಕಟ್ಟಡ (ಹಿಂಭಾಗ), 1ನೇ ಮಹಡಿ, ನಂ.8, ಕನ್ನಿಂಗ್‌ಹ್ಯಾಂ ರಸ್ತೆ, ಬೆಂಗಳೂರು-52.

**ರಾಜ್ಯ ಚುನಾವಣಾ ಆಯೋಗದ ಆದೇಶ ಸಂಖ್ಯೆ: ರಾಚುಆ:30:ಇಯುಬಿ:2018,**
**ಬೆಂಗಳೂರು, ದಿನಾಂಕ: 09-08-2018**

ರಾಜ್ಯ ಚುನಾವಣಾ ಆಯೋಗವು ಕರ್ನಾಟಕ ಪೌರನಿಗಮಗಳ (ಚುನಾವಣಾ) ನಿಯಮಗಳು, 1979ರ ನಿಯಮ 3(1) ರಲ್ಲಿ ದತ್ತವಾಗಿರುವ ಅಧಿಕಾರದ ಮೇರೆಗೆ ಈ ಕೆಳಗೆ ನಮೂದಿಸಿರುವ ಮೂರು ಮಹಾನಗರಪಾಲಿಕೆಗಳಿಗೆ ಕೆಳಕಂಡ ಚುನಾವಣಾ ವೇಳಾಪಟ್ಟಿಯಂತೆ ಸಾರ್ವತ್ರಿಕ ಚುನಾವಣೆಯನ್ನು ನಡೆಸಲು ಆದೇಶಿಸಿದೆ.

| ಕ್ರ. ಸಂ. | ಜಿಲ್ಲೆ | ನಗರ ಸ್ಥಳೀಯ ಸಂಸ್ಥೆ |
|---|---|---|
| 1 | ಮೈಸೂರು | ಮೈಸೂರು ಮಹಾನಗರ ಪಾಲಿಕೆ |
| 2 | ಶಿವಮೊಗ್ಗ | ಶಿವಮೊಗ್ಗ ಮಹಾನಗರ ಪಾಲಿಕೆ |
| 3 | ತುಮಕೂರು | ತುಮಕೂರು ಮಹಾನಗರ ಪಾಲಿಕೆ |

## ಚುನಾವಣಾ ವೇಳಾ ಪಟ್ಟಿ

| | | |
|---|---|---|
| 1 | ಜಿಲ್ಲಾಧಿಕಾರಿಗಳು ಚುನಾವಣಾ ಅಧಿಸೂಚನೆಯನ್ನು ಹೊರಡಿಸುವ ದಿನಾಂಕ ಮತ್ತು ದಿನ | 13-08-2018 (ಸೋಮವಾರ) |
| 2 | ನಾಮಪತ್ರಗಳನ್ನು ಸಲ್ಲಿಸಲು ಕೊನೆಯ ದಿನಾಂಕ ಮತ್ತು ದಿನ | 20-08-2018 (ಸೋಮವಾರ) |
| 3 | ನಾಮಪತ್ರಗಳನ್ನು ಪರಿಶೀಲಿಸುವ ದಿನಾಂಕ ಮತ್ತು ದಿನ | 21-08-2018 (ಮಂಗಳವಾರ) |
| 4 | ಉಮೇದುವಾರಿಕೆಗಳನ್ನು ಹಿಂತೆಗೆದುಕೊಳ್ಳಲು ಕೊನೆಯ ದಿನಾಂಕ ಮತ್ತು ದಿನ | 23-08-2018 (ಗುರುವಾರ) |
| 5 | ಮತದಾನ ಅವಶ್ಯವಿದ್ದರೆ, ಮತದಾನವನ್ನು ನಡೆಸಬೇಕಾದ ದಿನಾಂಕ ಮತ್ತು ದಿನ (ಸಮಯ ಬೆಳಿಗ್ಗೆ 7.00 ಗಂಟೆಯಿಂದ ಸಾಯಂಕಾಲ 5.00 ಗಂಟೆವರೆಗೆ) | **31-08-2018** (ಶುಕ್ರವಾರ) |
| 6 | ಮರು ಮತದಾನ ಇದ್ದಲ್ಲಿ ಮತದಾನ ನಡೆಸಬೇಕಾದ ದಿನಾಂಕ ಮತ್ತು ದಿನ (ಸಮಯ ಬೆಳಿಗ್ಗೆ 7.00 ಗಂಟೆಯಿಂದ ಸಾಯಂಕಾಲ 5.00 ಗಂಟೆವರೆಗೆ) | 02-09-2018 (ಭಾನುವಾರ) |
| 7 | ಮತಗಳ ಎಣಿಕೆಯ ದಿನಾಂಕ ಮತ್ತು ದಿನ (ಬೆಳಿಗ್ಗೆ 8.00 ಗಂಟೆಯಿಂದ) (ಕೇಂದ್ರ ಸ್ಥಾನದಲ್ಲಿ) | 03-09-2018 (ಸೋಮವಾರ) |
| 8 | ಚುನಾವಣೆಯನ್ನು ಯಾವ ದಿನಾಂಕಕ್ಕೆ ಮುಂಚೆ ಮುಕ್ತಾಯಗೊಳಿಸಬೇಕೋ ಆ ದಿನಾಂಕ ಮತ್ತು ದಿನ | 03-09-2018 (ಸೋಮವಾರ) |

**ಚುನಾವಣೆ ನಡೆಯುವ ಮಹಾನಗರ ಪಾಲಿಕೆಗಳ ವ್ಯಾಪ್ತಿಯಲ್ಲಿ ಚುನಾವಣಾ ನೀತಿ ಸಂಹಿತೆಯು ತಕ್ಷಣದಿಂದ ಜಾರಿಗೆ ಬಂದಿದ್ದು ದಿನಾಂಕ: 03-09-2018 ರವರೆಗೆ ಜಾರಿಯಲ್ಲಿರುತ್ತದೆ.**

(signature)

ಜಿಲ್ಲಾಧಿಕಾರಿಗಳು ಆಯೋಗವು ಆದೇಶಿಸಿದ ಚುನಾವಣಾ ವೇಳಾಪಟ್ಟಿಯನ್ನು ಅನುಸರಿಸಿ ಕರ್ನಾಟಕ ಪೌರನಿಗಮಗಳ (ಚುನಾವಣಾ) ನಿಯಮಗಳು, 1979ರ ನಿಯಮ 10 ರಡಿಯಲ್ಲಿ ಮಹಾನಗರ ಪಾಲಿಕೆಗೆ ಸಂಬಂಧಿಸಿದ ಚುನಾವಣಾ ಅಧಿಸೂಚನೆಯನ್ನು ಪ್ರಪತ್ರ-1 ರಲ್ಲಿ ಹೊರಡಿಸತಕ್ಕದ್ದು. ಚುನಾವಣಾ ಅಧಿಸೂಚನೆಯಲ್ಲಿ ಚುನಾವಣೆ ನಡೆಯುವ ನಗರ ಸ್ಥಳೀಯ ಸಂಸ್ಥೆಯ ಹೆಸರು, ವಾರ್ಡಿನ ಸಂಖ್ಯೆ, ಮೀಸಲಾತಿ ವಿವರಗಳನ್ನು ಸ್ಪಷ್ಟವಾಗಿ ನಮೂದಿಸುವುದು. ಹೊರಡಿಸಲಾದ ಅಧಿಸೂಚನೆಯನ್ನು ಅದೇ ದಿನದಂದು ವಿಶೇಷ ರಾಜ್ಯ ಪತ್ರದಲ್ಲಿ ಪ್ರಕಟಿಸತಕ್ಕದ್ದು. ಅಧಿಸೂಚನೆಯ ಪ್ರತಿಗಳನ್ನು ಜಿಲ್ಲಾಧಿಕಾರಿಗಳ ಕಛೇರಿ, ಸಂಬಂಧಪಟ್ಟ ನಗರ ಸ್ಥಳೀಯ ಸಂಸ್ಥೆಗಳ ಕಛೇರಿ ಹಾಗೂ ಇನ್ನಿತರ ಮುಖ್ಯ ಸ್ಥಳಗಳಲ್ಲಿಯೂ ಸಹಾ ಪ್ರದರ್ಶಿಸತಕ್ಕದ್ದು ಹಾಗೂ ಆಯೋಗಕ್ಕೆ ಅಂದೇ ಇ-ಮೇಲ್ ಮೂಲಕ ಕಳುಹಿಸುವುದು.

ಅಧಿಸೂಚನೆಯ ಪ್ರತಿಯನ್ನು ಸಂಬಂಧಿಸಿದ ಚುನಾವಣಾಧಿಕಾರಿಗಳಿಗೆ ಕಳುಹಿಸಿಕೊಟ್ಟು ಅದೇ ದಿನದಂದು ಚುನಾವಣಾಧಿಕಾರಿಗಳು ಪ್ರಪತ್ರ-1ಎ ರಲ್ಲಿ ಚುನಾವಣಾ ನೋಟೀಸನ್ನು ಪ್ರಕಟಿಸುವಂತೆ ಹಾಗೂ ಚುನಾವಣೆ ಪ್ರಕ್ರಿಯೆಯನ್ನು ಪ್ರಾರಂಭಿಸುವಂತೆ ಸೂಚಿಸುವುದು. ಚುನಾವಣಾ ವೇಳಾಪಟ್ಟಿಯನ್ನು ಸಾರ್ವಜನಿಕರ ಮಾಹಿತಿಗಾಗಿ ದಿನಪತ್ರಿಕೆಗಳಲ್ಲಿ ಹಾಗೂ ಸ್ಥಳೀಯ ಪತ್ರಿಕೆಗಳಲ್ಲಿ (ವೆಚ್ಚ ಬಾರದಂತೆ) ಪ್ರಕಟಿಸಲು ಎಲ್ಲಾ ಕ್ರಮಗಳನ್ನು ತೆಗೆದುಕೊಳ್ಳುವುದು.

**ವಿಶೇಷ ಸೂಚನೆ :-**

1. ಈಗಾಗಲೇ ನೀಡಿರುವ ನಿರ್ದೇಶನಗಳಂತೆ, ಚುನಾವಣೆ ನಡೆಯಲಿರುವ ಮಹಾನಗರ ಪಾಲಿಕೆಗೆ ಸಂಬಂಧಿಸಿದಂತೆ ಹಾಲಿ ಚಾಲ್ತಿಯಲ್ಲಿರುವ ವಿಧಾನಸಭಾ ಮತದಾರರ ಪಟ್ಟಿಯನ್ನು ಅಳವಡಿಸಿಕೊಂಡು ತಯಾರಿಸಲಾಗುವ ಮತದಾರರ ಪಟ್ಟಿಯಂತೆ ಚುನಾವಣೆ ನಡೆಸುವುದು.
2. ಚುನಾವಣೆ ನಡೆಸಲಾಗುವ ಮಹಾನಗರ ಪಾಲಿಕೆಗಳ ಚುನಾವಣಾಧಿಕಾರಿ ಹಾಗೂ ಸಹಾಯಕ ಚುನಾವಣಾಧಿಕಾರಿಗಳಿಗೆ ಸೂಕ್ತ ತರಬೇತಿಯನ್ನು ನೀಡುವುದು ಮತ್ತು ಚುನಾವಣೆಗೆ ಸಂಬಂಧಪಟ್ಟ ಎಲ್ಲಾ ಅಗತ್ಯ ಮಾಹಿತಿ, ಸುತ್ತೋಲೆ ಹಾಗೂ ನಿರ್ದೇಶನ ಪತ್ರಗಳ ಪ್ರತಿಯನ್ನು ನೀಡುವುದು.
3. ನೀತಿ ಸಂಹಿತೆ ಉಲ್ಲಂಘನೆ ಪ್ರಕರಣಗಳು ಗಮನಕ್ಕೆ ಬಂದಾಗ ಆಯೋಗದ ಆದೇಶ ಸಂಖ್ಯೆ: ಎಸ್‌ಇಸಿ.10. ಎಂಐಎಸ್‌ಸಿ.2016 ದಿನಾಂಕ: 29-06-2016 ಹಾಗೂ ತಿದ್ದುಪಡಿ ದಿನಾಂಕ:06-07-2016 ರಂತೆ ಕ್ರಮವಹಿಸುವುದು.
4. ಕಾಲಕಾಲಕ್ಕೆ ಚುನಾವಣೆಗೆ ಸಂಬಂಧಿಸಿದ ವರದಿಯನ್ನು ಆಯೋಗಕ್ಕೆ ಸಲ್ಲಿಸುವುದು.
5. ರಾಜ್ಯ ಚುನಾವಣಾ ಆಯೋಗದ ಆದೇಶ ಸಂಖ್ಯೆ: ರಾಚುಆ.14.ಇಯುಬಿ.2017 ದಿನಾಂಕ:10-03-2017 ರಂತೆ ಮತಪತ್ರದಲ್ಲಿ "NOTA" ಅವಕಾಶ ಕಲ್ಪಿಸುವುದು.
6. ರಾಜ್ಯ ಚುನಾವಣಾ ಆಯೋಗದ ಆದೇಶ ಸಂಖ್ಯೆ: ರಾಚುಆ.28.ಇಯುಬಿ.2018 ದಿನಾಂಕ:01-06-2018 ರಂತೆ ಮತಪತ್ರದಲ್ಲಿ ಎಲ್ಲಾ ಅಭ್ಯರ್ಥಿಗಳ ಹೆಸರಿನ ಮುಂದೆ ಅವರ ಇತ್ತೀಚಿನ ಭಾವಚಿತ್ರ ಮುದ್ರಿಸುವಂತೆ ಕ್ರಮ ಕೈಗೊಳ್ಳುವುದು.

ಚುನಾವಣೆ ಪ್ರಕ್ರಿಯೆ ಜಾರಿಯಲ್ಲಿರುವ ಸಂದರ್ಭದಲ್ಲಿ ಜಿಲ್ಲಾಧಿಕಾರಿಗಳು ಸದಾಚಾರ ಸಂಹಿತೆಯು ಯಾವುದೇ ರೀತಿಯಲ್ಲೂ ಉಲ್ಲಂಘನೆಯಾಗದಂತೆ ನೋಡಿಕೊಳ್ಳತಕ್ಕದ್ದು.

ಆದೇಶಾನುಸಾರ

ಅರ್ಚನ .ಎಂ ಎಸ್.
(ಅರ್ಚನ ಎಂ.ಎಸ್) 9/8/2018
ಅಧೀನ ಕಾರ್ಯದರ್ಶಿ,
ರಾಜ್ಯ ಚುನಾವಣಾ ಆಯೋಗ, ಕರ್ನಾಟಕ.

**ಇವರಿಗೆ:**

ಜಿಲ್ಲಾಧಿಕಾರಿಗಳು ಮೈಸೂರು, ಶಿವಮೊಗ್ಗ ಮತ್ತು ತುಮಕೂರು ಜಿಲ್ಲೆ.